23	ಮಂಡ್ಯ	67	254.2
24	ರಾಯಚೂರು	10	135.8
25	ರಾಮನಗರ	15	27.8
26	ಶಿವಮೊಗ್ಗ	82	1598.3
27	ತುಮಕೂರು	116	839.86
28	ಉಡುಪಿ	34	142.5
29	ಉತ್ತರ ಕನ್ನಡ	27	62
30	ಯಾದಗಿರಿ	21	354.6
31	ಹೊರರಾಜ್ಯ	5	550
	ಒಟ್ಟು	**1137**	**10018.36**

ಸೇಡಂ ವಿಧಾನಸಭಾ ಕ್ಷೇತ್ರದಲ್ಲಿ ಸರ್ಕಾರಿ ಪಾಲಿಟೆಕ್ನಿಕ್ ಪ್ರಾರಂಭ

78 (401) ಡಾ: ಶರಣಪ್ರಕಾಶ ರುದ್ರಪ್ಪ ಪಾಟೀಲ್ (ಸೇಡಂ):– ಮಾನ್ಯ ಉನ್ನತ ಶಿಕ್ಷಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಸೇಡಂ ಪಟ್ಟಣದಲ್ಲಿ ಮತ್ತು ಸೇಡಂ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಚಿಂಚೋಳಿ ತಾಲ್ಲೂಕಿನ ಸುಲೇಪೇಟೆ ಗ್ರಾಮದಲ್ಲಿ ಸರ್ಕಾರಿ ಪಾಲಿಟೆಕ್ನಿಕ್ ಪ್ರಾರಂಭ ಮಾಡುವ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಯಾವಾಗ ಪ್ರಾರಂಭಿಸಲಾಗುವುದು?

ಡಾ: ವಿ.ಎಸ್. ಆಚಾರ್ಯ (ಮಾನ್ಯ ಉನ್ನತ ಶಿಕ್ಷಣ ಸಚಿವರು):–

ಅ) ಬಂದಿದೆ.

ಆ) ವಿದ್ಯಾರ್ಥಿಗಳ ಸಂಖ್ಯೆ, ಜಮೀನಿನ ಲಭ್ಯತೆ, ಹಣಕಾಸಿನ ಲಭ್ಯತೆ ಅನುಸಾರ ಸರ್ಕಾರಿ ಪಾಲಿಟೆಕ್ನಿಕ್‌ನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದು.

ಸೇಡಂ ಮತಕ್ಷೇತ್ರದಲ್ಲಿ ಹೊಸದಾಗಿ ಪಶು ಚಿಕಿತ್ಸಾಲಯಗಳ ಪ್ರಾರಂಭ

79 (402) ಡಾ: ಶರಣಪ್ರಕಾಶ ರುದ್ರಪ್ಪ ಪಾಟೀಲ್ (ಸೇಡಂ):– ಮಾನ್ಯ ಲೋಕಶಿಕ್ಷಣ, ಸಾರ್ವಜನಿಕ ಗ್ರಂಥಾಲಯ, ಸಣ್ಣ ಉಳಿತಾಯ ಹಾಗೂ ಲಾಟರಿ ಮತ್ತು ಪಶುಸಂಗೋಪನೆ

ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಸೇಡಂ ವಿಧಾನಸಭಾ ಕ್ಷೇತ್ರದಲ್ಲಿ ಹೊಸದಾಗಿ ಪಶುಚಿಕಿತ್ಸಾಲಯಗಳು ಪ್ರಾರಂಭಿಸುವ ಪ್ರಸ್ತಾವನೆ ಸರಕಾರದಲ್ಲಿದೆಯೇ; ಹಾಗಿದ್ದಲ್ಲಿ, ಯಾವ ಸ್ಥಳಗಳಲ್ಲಿ ಮತ್ತು ಎಂದು ಪ್ರಾರಂಭಿಸಲಾಗುವುದು;

ಆ) ಸೇಡಂ ವಿಧಾನ ಸಭಾ ಕ್ಷೇತ್ರದಲ್ಲಿ ಖಾಲಿ ಇರುವ ಪಶು ವೈದ್ಯರ ಹುದ್ದೆಗಳೆಷ್ಟು; ಯಾವಾಗ ಭರ್ತಿ ಮಾಡಲಾಗುವುದು?

ಶ್ರೀ ರೇವೂನಾಯಕ್ ಬೆಳಮಗಿ (ಮಾನ್ಯ ಲೋಕಶಿಕ್ಷಣ, ಸಾರ್ವಜನಿಕ ಗ್ರಂಥಾಲಯ, ಸಣ್ಣ ಉಳಿತಾಯ ಹಾಗೂ ಲಾಟರಿ ಮತ್ತು ಪಶುಸಂಗೋಪನೆ ಸಚಿವರು):–

ಅ) 2007ರ ಜಾನುವಾರು ಗಣತಿಯಂತೆ ಸೇಡಂ ತಾಲ್ಲೂಕಿನಲ್ಲಿ ಒಟ್ಟು 82,118 ಜಾನುವಾರು ಘಟಕಗಳಿರುತ್ತದೆ. ರಾಷ್ಟ್ರೀಯ ಕೃಷಿ ಆಯೋಗದ ಶಿಫಾರಸ್ಸಿನಂತೆ ಪ್ರತಿ 5,000 ಜಾನುವಾರು ಘಟಕಗಳಿಗೆ ಒಂದು ಪಶುವೈದ್ಯಕೀಯ ಸಂಸ್ಥೆಯಂತೆ ಅಲ್ಲಿ 16 ಪಶು ವೈದ್ಯಕೀಯ ಸಂಸ್ಥೆಗಳಿರಬೇಕಾಗಿರುತ್ತದೆ. ಆದರೆ ಪ್ರಸ್ತುತ 18 ಪಶುವೈದ್ಯಕೀಯ ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿದ್ದು 2 ಸಂಸ್ಥೆಗಳು ಹೆಚ್ಚಾಗಿರುತ್ತದೆ.

ರಾಜ್ಯದ ಬಹಳಷ್ಟು ಪಶುಆಸ್ಪತ್ರೆ ಮತ್ತು ಪಶುಚಿಕಿತ್ಸಾಲಯಗಳಲ್ಲಿ ಮೂಲಭೂತ ಸೌಕರ್ಯದ ಕೊರತೆ ಹಾಗೂ ಪದವೀಧರ ಪಶುವೈದ್ಯರ ಕೊರತೆ ಇರುವುದರಿಂದ ಹೊಸದಾಗಿ ಪಶುವೈದ್ಯಕೀಯ ಸಂಸ್ಥೆಗಳನ್ನು ತೆರೆಯುವ ಪ್ರಸ್ತಾವನೆಯನ್ನು ತಾತ್ಕಾಲಿಕವಾಗಿ ಮುಂದೂಡಲಾಗಿದೆ.

ಆ) ಸೇಡಂ ವಿಧಾನ ಸಭಾ ಕ್ಷೇತ್ರದಲ್ಲಿ 7 ಪಶುವೈದ್ಯಾಧಿಕಾರಿ ಹುದ್ದೆಗಳು ಖಾಲಿ ಇದ್ದು ಅದರ ವಿವರ ಕೆಳಕಂಡಂತಿರುತ್ತದೆ.

ಪಶು ಆಸ್ಪತ್ರೆ, ಸೇಡಂ

1.	ಅ. ಸಂಚಾರಿ ಪಶು ಚಿಕಿತ್ಸಾಲಯ, ಸೇಡಂ	1
2.	ಆ. ವಿಸ್ತರಣಾಧಿಕಾರಿ	1
3.	ಪಶು ಚಿಕಿತ್ಸಾಲಯ, ಮೋತಕಪಲ್ಲಿ	1
4.	ಪಶು ಚಿಕಿತ್ಸಾಲಯ, ಮಳಖೇಡ	1

5.	ಪಶು ಚಿಕಿತ್ಸಾಲಯ, ಕುರುಕುಂಟ	1
6.	ಪಶು ಚಿಕಿತ್ಸಾಲಯ, ಕೋಲಕುಂಟ	1
7.	ಪಶು ಚಿಕಿತ್ಸಾಲಯ, ಅಡಕೈ	1

136 ಪಶುವೈದ್ಯಾಧಿಕಾರಿ ಹುದ್ದೆಗಳನ್ನು ವಿಶೇಷ ನೇಮಕಾತಿ ನಿಯಮದಡಿ ನೇಮಕಾತಿ ಮಾಡುವ ಪ್ರಕ್ರಿಯೆ ಜಾರಿಯಲ್ಲಿದ್ದು, ನೇಮಕಾತಿ ಮಾಡುವಾಗ ಖಾಲಿ ಇರುವ ಪಶುವೈದ್ಯಾಧಿಕಾರಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

ರಾಜ್ಯದಲ್ಲಿ 13ನೇ ಹಣಕಾಸು ಯೋಜನೆ ಅನುದಾನ ಹಂಚಿಕೆ

81 (134) ಶ್ರೀ ಗೂಳಿಹಟ್ಟಿ ಡಿ. ಶೇಖರ (ಹೊಸದುರ್ಗ):– ಮಾನ್ಯ ಮುಖ್ಯಮಂತ್ರಿಗಳು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಕೇಂದ್ರ ಸರ್ಕಾರದ 13ನೇ ಹಣಕಾಸು ಯೋಜನೆಯಲ್ಲಿ ರಾಜ್ಯಕ್ಕೆ ಬಂದ ಅನುದಾನವೆಷ್ಟು? (ಇಲಾಖೆವಾರು ಮತ್ತು ಯೋಜನೆಗಳ ವಿವರ ನೀಡುವುದು)

ಆ) ಅನುದಾನ ಪೂರ್ತಿ ಖರ್ಚಾಗಿದೆಯೇ ಆಥವಾ ಇಲ್ಲವೇ ಎಂಬುದರ ಮಾಹಿತಿ ನೀಡುವುದು;

ಇ) ಕೇಂದ್ರ ಸರ್ಕಾರದಿಂದ ಕಳೆದ ಮೂರು ವರ್ಷಗಳಿಂದ ರಾಜ್ಯಕ್ಕೆ ಬಂದ ಅನುದಾನವೆಷ್ಟು? (ಇಲಾಖೆವಾರು, ಯೋಜನೆವಾರು ಮಾಹಿತಿ ನೀಡುವುದು)

ಈ) ಕೇಂದ್ರ ಅನುದಾನ ಸಮರ್ಪಕವಾಗಿ ಬಳಕೆಯಾಗಿದೆಯೇ

ಉ) ಕಳೆದ ಮೂರು ವರ್ಷಗಳಿಂದ ರಾಜ್ಯದಲ್ಲಿ ಸಂಗ್ರಹಿಸಿದ ರಾಜ್ಯಸ್ವ ಸಂಗ್ರಹವೆಷ್ಟು; (ಇಲಾಖೆವಾರು ವರ್ಷವಾರು ಮಾಹಿತಿ ನೀಡುವುದು)

ಊ) 2008 ರಿಂದ 2011 ರವರೆಗೆ ಇಲಾಖಾವಾರು ಹಂಚಿಕೆಯಾದ ಅನುದಾನವೆಷ್ಟು; ಇದುವರೆವಿಗೂ ವಿವಿಧ ಇಲಾಖೆಗಳಿಗೆ ಬಿಡುಗಡೆಯಾದ ಅನುದಾನವೆಷ್ಟು? ಬಿಡುಗಡೆಯಾದ ಅನುದಾನದಲ್ಲಿ ಇದುವರೆಗೂ ಖರ್ಚಾದ ಅನುದಾನವೆಷ್ಟು;

ಋ) ರಾಜ್ಯದಲ್ಲಿನ ವಿವಿಧ ಇಲಾಖೆಗಳಲ್ಲಿ ಕಳೆದ ಮೂರು ವರ್ಷಗಳಿಂದ ಪ್ರತಿ ವರ್ಷ ಅನುದಾನ ಹಂಚಿಕೆಯಾದರು ಯೋಜನೆಗಳನ್ನು ಕೈಗೆತ್ತಿಕೊಳ್ಳದೇ ಅನುದಾನ